# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1218 |
| 2 | ಸದಸ್ಯರ ಹೆಸರು | : | ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) |
| 3 | ಉತ್ತರಿಸುವ ದಿನಾಂಕ | : | 29-12-2022 |
| 4 | ಉತ್ತರಿಸುವವರು | : | ಮುಖ್ಯಮಂತ್ರಿಗಳು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರದ ವಿಧಾನಸೌಧ ಮತ್ತು ಹೈಕೋರ್ಟ್ ಸುತ್ತಮುತ್ತಲಿನ ಸ್ಥಳವು ಪ್ರವಾಸಿ ಸ್ಥಳವಾಗಿರುವುದರಿಂದ ಸಾರ್ವಜನಿಕರ ಅನುಕೂಲಕ್ಕಾಗಿ ಶೌಚಾಲಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೆಂಗಳೂರು ನಗರದ ವಿಧಾನಸೌಧ ಮತ್ತು ಹೈಕೋರ್ಟ್ ಸುತ್ತಮುತ್ತಲಿನ ಸ್ಥಳವು ಪ್ರವಾಸಿ ಸ್ಥಳವಾಗಿರುವುದರಿಂದ ಸಾರ್ವಜನಿಕರ ಅನುಕೂಲಕ್ಕಾಗಿ ಶೌಚಾಲಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ಈ ಸ್ಥಳಗಳಲ್ಲಿ ಶೌಚಾಲಯಗಳನ್ನು ನಿರ್ಮಿಸಬೇಕೆನ್ನುವ ಬೇಡಿಕೆ ಹಲವು ವರ್ಷಗಳಿಂದ ಇದ್ದರೂ ಸರ್ಕಾರ ಈ ಬಗ್ಗೆ ಗಮನ ಹರಿಸದೆ ಇರಲು ಕಾರಣಗಳೇನು: | ವಿಧಾನಸೌಧ ಹಾಗೂ ಹೈಕೋರ್ಟ್ ಸುತ್ತಮುತ್ತಲಿನ ಸ್ಥಳಗಳಲ್ಲಿ ಶೌಚಾಲಯಗಳ ಅಗತ್ಯತೆ ಇರುವುದು ಕಂಡುಬಂದಿರುತ್ತದೆ. ಅದರಂತೆ, ಪಾಡ್ ಮಾದರಿಯಲ್ಲಿ (1.60 ಮೀ Dia) ಹಾಗೂ ಪ್ರೀ-ಕಾಸ್ಟ್ ಮಾದರಿಯ (15m x 3m) ಉತ್ತಮ ದರ್ಜೆಯ ಶೌಚಾಲಯಗಳನ್ನು ನಿರ್ಮಿಸಲು ಈಗಾಗಲೇ ಯೋಜಿಸಲಾಗಿರುತ್ತದೆ. ಸದರಿ ಶೌಚಾಲಯಗಳನ್ನು ಅಗತ್ಯತೆ ಹಾಗೂ ಲಭ್ಯವಿರುವ ಸ್ಥಳಗಳಲ್ಲಿ ನಿರ್ಮಿಸಲು ಕ್ರಮವಹಿಸಲಾಗುವುದು. ಅದರಂತೆ, Mobile toilet unit ಗಳನ್ನು ಸಹ ಅಳವಡಿಸಲು ಯೋಜಿಸಲಾಗಿದೆ. |
| ಇ) | ಆದಷ್ಟು ಜಾಗ್ರತೆಯಾಗಿ ಪ್ರವಾಸಿಗರು ಹಾಗೂ ಸಾರ್ವಜನಿಕರ ಅನುಕೂಲಕ್ಕಾಗಿ ಶೌಚಾಲಯಗಳನ್ನು ನಿರ್ಮಿಸಲಾಗುವುದೇ? | ಸಾರ್ವಜನಿಕರ ಹಾಗೂ ಪ್ರವಾಸಿಗರ ಅನುಕೂಲಕ್ಕೆ ಉತ್ತಮ ದರ್ಜೆಯ ಗುಣಮಟ್ಟದಲ್ಲಿ ಶೌಚಾಲಯಗಳನ್ನು ನಿರ್ಮಿಸಲಾಗುವುದು. |

**ಸಂಖ್ಯೆ: ನಅಇ 962 ಎಂಎನ್‌ವೈ 2022**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ